ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 31-12-2015

# ಪತ್ರಿಕಾ ಪ್ರಕಟಣೆ

## ‘ಪ್ರಗತಿ ಮಾಹಿತಿ’ ಪ್ರಚಾರಾಂದೋಲನಕ್ಕೆ ಮುಖ್ಯಮಂತ್ರಿಗಳಿಂದ ಇಂದು ಚಾಲನೆ

ಬೆಂಗಳೂರು, ಡಿಸೆಂಬರ್ 31(ಕರ್ನಾಟಕ ವಾರ್ತೆ)

ರಾಜ್ಯ ಸರ್ಕಾರ ರಾಜ್ಯದ ಜನತೆಯ ಕಲ್ಯಾಣಕ್ಕಾಗಿ ಜಾರಿಗೆ ತಂದಿರುವ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಜನಸಾಮಾನ್ಯರಲ್ಲಿ ಅರಿವು ಮೂಡಿಸುವ ಮೂಲಕ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ‘ಪ್ರಗತಿ ಮಾಹಿತಿ’ ಪ್ರಚಾರಾಂದೋಲನ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸೌಧದ ಮುಂಭಾಗದಲ್ಲಿ ಏರ್ಪಡಿಸಲಾಗಿದ್ದ ಕಾರ್ಯಕ್ರಮದಲ್ಲಿ ಚಾಲನೆ ನೀಡಿದರು.

ಸರ್ಕಾರದ ಅಭಿವೃದ್ಧಿ ಯೋಜನೆಗಳನ್ನು ಗ್ರಾಮೀಣ ಭಾಗಗಳಿಗೆ ಪರಿಚಯಿಸುವ ಎಲ್.ಇ.ಡಿ. ತಂತ್ರಜ್ಞಾನದ ಪ್ರದರ್ಶನ ವಾಹನವನ್ನು ರಿಮೋಟ್ ಬಟನ್ ಒತ್ತುವ ಮೂಲಕ ಇಂದು ಮುಖ್ಯಮಂತ್ರಿಗಳು ಪ್ರಗತಿ ಮಾಹಿತಿ ಪ್ರಚಾರಾಂದೋಲನಕ್ಕೆ ಚಾಲನೆ ನೀಡಿ, ತದನಂತರ ಅಭಿವೃದ್ಧಿ ಕಾರ್ಯಕ್ರಮವನ್ನು ವೀಕ್ಷಿಸಿದರು.

ವಿದ್ಯಾಸಿರಿ, ರಾಜೀವ್ ಆರೋಗ್ಯಭಾಗ್ಯ, ಮಹಿಳೆಯರಿಗೆ ಮನಸ್ವಿನಿ, ಲಿಂಗ ಅಲ್ಪಸಂಖ್ಯಾತರಿಗಾಗಿ ಮೈತ್ರಿ, ಅನ್ನಭಾಗ್ಯ, ಕ್ಷೀರಭಾಗ್ಯ, ಕೃಷಿಭಾಗ್ಯ ಇತ್ಯಾದಿ, ಹೀಗೆ ರಾಜ್ಯ ಸರ್ಕಾರ ಜಾರಿಗೆ ತಂದು ಅನುಷ್ಠಾನಗೊಳಿಸಿರುವ ಹಲವಾರು ಯೋಜನೆಗಳ ಬಗ್ಗೆ ಗ್ರಾಮೀಣ ಪ್ರದೇಶದ ಜನರಿಗೆ ಮನದಟ್ಟು ಮಾಡಿಕೊಡಲು ಕಲಾತಂಡಗಳನ್ನು ಬಳಸಿಕೊಂಡು ಪ್ರಚಾರ ನೀಡುವ ಅರಿವಿನ ಆಂದೋಲನವನ್ನು ಮೂರನೇ ಹಂತದಲ್ಲಿ 1015 ಹಳ್ಳಿಗಳಲ್ಲಿ ನಡೆಸಲಾಗುತ್ತಿದ್ದು , 39 ವಾಹನಗಳನ್ನು ಬಳಸಿಕೊಂಡು ಬಾಗಲಕೋಟೆ, ಕೋಲಾರ ,ಗದಗ, ಬಳ್ಳಾರಿ, ರಾಯಚೂರು ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಪ್ರಚಾರ ನೀಡಲಾಗುವುದು.

ಈ ಸಂದರ್ಭದಲ್ಲಿ ಸಚಿವರುಗಳಾದ ಆರ್. ರೋಷನ್ ಬೇಗ್, ಕೆ.ಜೆ. ಜಾರ್ಜ್, ಹೆಚ್.ಸಿ. ಮಹಾದೇವಪ್ಪ, ರಾಮಲಿಂಗಾ ರೆಡ್ಡಿ ಮತ್ತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿ. ಎನ್. ಎಸ್. ಚನ್ನಪ್ಪಗೌಡ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್. ಆರ್. ವಿಶುಕುಮಾರ್ ಸೇರಿದಂತೆ ಇಲಾಖೆಯ ಅಧಿಕಾರಿಗಲು ಉಪಸ್ಥಿತರಿದ್ದರು.

ಪಲ್ಲವಿ:ಮಮತ:ಜಿಪಿಆರ್

# 2015-16 ನೇ ಸಾಲಿನ
# ಕೃಷಿ ಪಂಡಿತ ಪ್ರಶಸ್ತಿಗೆ ನಾಮನಿರ್ದೇಶನ

ಬೆಂಗಳೂರು, ಡಿಸೆಂಬರ್ 31(ಕರ್ನಾಟಕ ವಾರ್ತೆ)

ಕೃಷಿ ವಲಯದಲ್ಲಿ ಹೊಸ ಅನ್ವೇಷಣೆ ಮತ್ತು ಸೃಜನಾತ್ಮಕ ಕಾರ್ಯಗಳಾದ ವಿಶಿಷ್ಠ ಮತ್ತು ಗಮನಾರ್ಹ ಸಾಧನೆ ಮೂಲಕ ರೈತ ಸಮದಾಯದ ಶ್ರೇಯೋಭಿವೃದ್ಧಿಗೆ ಅಪಾರ ಕೊಡುಗೆ ನೀಡುತ್ತಿರುವ ಪರಿಣಿತರಿಗೆ "ಕೃಷಿ ಪಂಡಿತ" ಪ್ರಶಸ್ತಿಯನ್ನು 2001-2002 ನೇ ಸಾಲಿನಿಂದ ನೀಡಲಾಗುತ್ತಿದೆ.

ಅದರನ್ವಯ 2015-16 ನೇ ಸಾಲಿಗೆ ಅನ್ವಯವಾಗುವಂತೆ ಕೃಷಿ ಪಂಡಿತ ಪ್ರಶಸ್ತಿಗೆ ರಾಜ್ಯದ ಆಸಕ್ತ ಮಹನೀಯರುಗಳಿಂದ ನಾಮ ನಿರ್ದೇಶನಗಳನ್ನು ಆಹ್ವಾನಿಸಲಾಗಿದೆ.

ಕೃಷಿ ಪಂಡಿತ ಪ್ರಶಸ್ತಿಯಲ್ಲಿ ಭಾಗವಹಿಸಲು ಇಚ್ಛಿಸುವವರು ರಾಜ್ಯ ಕೃಷಿ ಕ್ಷೇತ್ರದಲ್ಲಿ ವಿನೂತನ/ಹೊಸ ಅನ್ವೇಷಣೆ ಮತ್ತು ಸೃಜನಾತ್ಮಕ ಕಾರ್ಯಗಳಿಂದ ಗಮನಾರ್ಹ ಸಾಧನೆ ಮಾಡಿರುವ ಮತ್ತು ರೈತ ಸಮುದಾಯದ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡುತ್ತಿರುವವರಾಗಿರಬೇಕು. ಭಾಗವಹಿಸುವವರ ಸಂಶೋಧನೆ/ಸಾಧನೆಗಳು ಮೂಲ ಸ್ವರೂಪದಾಗಿದ್ದು ಬೇರೆಯವರ ಸಾಧನೆಗಿಂತ ವಿಭಿನ್ನವಾಗಿರಬೇಕು. ಅಲ್ಲದೇ ಅವರ ಸಂಶೋಧನೆಗಳು/ಸಾಧನೆಗಳು ವ್ಯಾಪಕವಾಗಿ ಅಳವಡಿಸಲ್ಪಟ್ಟಿದ್ದು ಕೃಷಿ ಕ್ಷೇತ್ರದ ಏಳಿಗೆಗೆ ಕಾರಣವಾಗಿರಬೇಕು.

ಸದರಿ ಪ್ರಶಸ್ತಿಗೆ ನಾಮ ನಿರ್ದೇಶನ ಸಲ್ಲಿಸಬಯಸುವ ಮಹನೀಯರುಗಳು ತಮ್ಮ ನಾಮ ನಿರ್ದೇಶನವನ್ನು ನಿಗದಿತ ಅರ್ಜಿ ನಮೂನೆಯಲ್ಲಿ ( ಅನುಬಂಧ-1 ಎ) ತುಂಬಿ ಸಂಬಂಧಪಟ್ಟ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ದಿನಾಂಕ 31-01-2016 ರೊಳಗಾಗಿ ಸಲ್ಲಿಸಬಹುದಾಗಿದೆ.

ಕೃಷಿ ಪಂಡಿತ ಪ್ರಥಮ – 1 ಲಕ್ಷ ರೂ, ಕೃಷಿ ಪಂಡಿತ ದ್ವಿತೀಯ – ರೂ. 75,000/- ಕೃಷಿ ಪಂಡಿತ – ತೃತೀಯ ರೂ 50,000/- 65ಕ್ಕಿಂತ ಹೆಚ್ಚು ಅಂಕ ಪಡೆದ ಮೊದಲ ಮೂವರಿಗೆ, ಕೃಷಿ ಪಂಡಿತ ಉದಯೋನ್ಮುಖ ತಲಾ 25,000/- ರೂ. ನಂತೆ ಮೊದಲ ಮೂವರ ನಂತರದ ಅಂದರೆ 65 ಕ್ಕಿಂತ ಹೆಚ್ಚು ಅಂಕ ಪಡೆದ ಉಳಿದ ವಿಜೇತರು (ಬಹುಮಾನಕ್ಕೆ ನಿಗದಿಪಡಿಸಿರುವ ಅನುದಾನದ ಮಿತಿಯೊಳಗೆ)

ಜಿಲ್ಲಾ ಜಂಟಿ ಕೃಷಿ ನಿರ್ದೇಶಕರುಗಳು ಹಾಗೆಯೇ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರುಗಳು ಈ ಕಾರ್ಯಕ್ರಮದ ಬಗ್ಗೆ ಸ್ಥಳೀಯವಾಗಿ ವ್ಯಾಪಕ ಪ್ರಚಾರ ಕಾರ್ಯವನ್ನು ನಿಮ್ಮ ಹಂತದಲ್ಲಿ ಕೈಗೊಳ್ಳಲು ಸೂಚಿಸಿದೆ. ಈ ಪ್ರಶಸ್ತಿಯನ್ನು ಈ ಹಿಂದೆ ಪಡೆಯದೇ ಇರುವಂತಹ ಅರ್ಹ ಮಹನೀಯರುಗಳಿಂದ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಪಡೆಯುವುದು.

ತಾಲ್ಲೂಕಿನಲ್ಲಿ ಸ್ವೀಕೃತವಾಗುವ ಎಲ್ಲಾ ಅರ್ಜಿದಾರರ ಪ್ರಾಥಮಿಕ ಕ್ಷೇತರ ಭೇಟಿಯನ್ನು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶರು ಕೈಗೊಂಡು ಅವರು ಗಮನಿಸಿದ ಅಂಶಗಳೊಂದಿಗೆ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರ ಕಚೇರಿಗೆ 15 ದಿನಗಳೊಳಗಾಗಿ ಸಲ್ಲಿಸುವುದು. ಈ ರೀತಿಯಾಗಿ ಸ್ವೀಕೃತವಾದ ಅರ್ಜಿಗಳನ್ನು ಜಂಟಿ ನಿರ್ದೇಶಕರ ಅಧ್ಯಕ್ಷತೆಯ ತಂಡವು ಪರಿಶೀಲಿಸಿ ಕೃಷಿ ಪಂಡಿತ ಪ್ರಶಸ್ತಿಗೆ ಯೋಗ್ಯವೆನಿಸುವಂತಹ ಅರ್ಜಿಗಳನ್ನು ಮಾತ್ರ ಕೇಂದ್ರ ಕಚೇರಿಗೆ ಕಿರು ಪಟ್ಟಿಯನ್ನು ತಯಾರಿಸಿ ಕಳುಹಿಸಿಕೊಡಬೇಕು ಎಂದು ಕೃಷಿ ನಿರ್ದೇಶನಾಲಯದ ಪ್ರಕಟಣೆಯಲ್ಲಿ ತಿಳಿಸಿದೆ.

ಕವನ:ಜಿಪಿಆರ್.

# ಮೈಸೂರಿನಲ್ಲಿ ಎರಡು ದಿನಗಳ
# ಸಂಶೋಧನಾ ಪ್ರಬಂಧ ಕುರಿತ ವಿಚಾರ ಸಂಕಿರಣ

ಬೆಂಗಳೂರು, ಡಿಸೆಂಬರ್ 31(ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ವತಿಯಿಂದ ದಿನಾಂಕ: 29-1-2016 ಹಾಗೂ 30-01-2016 ರ ಎರಡು ದಿನ ಮೈಸೂರು ನಗರದಲ್ಲಿ "National Seminar : On Participation of Scheduled Tribes in Indian Politics : Problems and Prospects" ಎಂಬ ವಿಷಯ ಕುರಿತು ರಾಷ್ಟ್ರೀಯ ವಿಚಾರ ಸಂಕಿರಣವನ್ನು ಆಯೋಜಿಸಲಾಗಿದೆ.

ಈ ವಿಚಾರ ಸಂಕಿರಣಕ್ಕೆ ರಾಜ್ಯದಲ್ಲಿನ ವಿವಿಧ ವಿಶ್ವವಿದ್ಯಾನಿಲಯಗಳು ಹಾಗೂ ಸರ್ಕಾರೇತರ ಸಂಸ್ಥೆಗಳಿಂದ ಬುಡಕಟ್ಟು ಸಮುದಾಯಗಳ ಸಂಶೋಧನೆಯಲ್ಲಿ ಆಸಕ್ತ ಪ್ರಾಧ್ಯಾಪಕರು, ಸಂಶೋಧಕರು, ಸಂಶೋಧನಾ ವಿದ್ಯಾರ್ಥಿಗಳಿಂದ ಸಂಶೋಧನ ಪ್ರಬಂಧಗಳನ್ನು ನಿಯಮಾನುಸಾರ ಆಹ್ವಾನಿಸಲಾಗಿದೆ.

ಪ್ರಾಧ್ಯಾಪಕರು ಮತ್ತು ಬೋಧಕ ವರ್ಗಕ್ಕೆ ರೂ. 1,000/- ಸಂಶೋಧನಾ ವಿದ್ಯಾರ್ಥಿಗಳಿಗೆ - ರೂ. 500/-, ನೋಂದಣಿ ಶುಲ್ಕವನ್ನು ನಿರ್ದೇಶಕರು, ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ಈ ಹೆಸರಿನಲ್ಲಿ ಡಿ.ಡಿ. ಖರೀದಿಸಿ, ನಿಗದಿತ ನಮೂನೆಯಲ್ಲಿ ಸಲ್ಲಿಸಬೇಕು. ಕಿರು ಪ್ರಬಂಧಗಳನ್ನು ಸಲ್ಲಿಸಲು ಕೊನೆಯ ದಿನಾಂಕ 15-1-2016, ಪೂರ್ಣ ಪ್ರಬಂಧಗಳನ್ನು ಸಲ್ಲಿಸಲು ಕೊನೆಯ ದಿನಾಂಕ 25-1-2016 ಹಾಗೂ ನೊಂದಣಿಗೆ ಕೊನೆಯ ದಿನಾಂಕ 27-1-2016.

ಸಂಶೋಧನಾ ಪ್ರಬಂಧಗಳನ್ನು ನಿರ್ದೇಶಕರು, ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ನಂ 1540, ಅನಿಕೇತನ ರಸ್ತೆ, ಕುವೆಂಪುನಗರ, ಮೈಸೂರು ವಿಳಾಸಕ್ಕೆ ಅಥವಾ ಇ-ಮೇಲ್ ಮುಖಾಂತರ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಸಂಸ್ಥೆಯ ದೂರವಾಣಿ ಸಂಖ್ಯೆ 0821 - 2560274/75 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಪ್ರಕಟಣೆ ತಿಳಿಸಿದೆ.
ಕವನ:ಜಿಪಿಆರ್

# ನೋಂದಾವಣೆಗೆ ಅರ್ಜಿ ಆಹ್ವಾನ

ಬೆಂಗಳೂರು, ಡಿಸೆಂಬರ್ 31(ಕರ್ನಾಟಕ ವಾರ್ತೆ)

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಲ್ಲಿ ನಡೆಯುವ ವಾಣಿಜ್ಯ ಪರೀಕ್ಷೆಯ ಮೌಲ್ಯಮಾಪನ ಕಾರ್ಯಕ್ಕೆ ಸಂಬಂಧಿಸಿದಂತೆ, ಕನ್ನಡ/ಆಂಗ್ಲ ಬೆರಳಚ್ಚು ಪ್ರಥಮ ದರ್ಜೆ, ಪ್ರೌಢ ದರ್ಜೆ, ಕನ್ನಡ/ಆಂಗ್ಲ ಶೀಘ್ರಲಿಪಿ, ಪ್ರವೀಣ ಪ್ರೌಢ, ಮಧ್ಯಮ, ಪ್ರಥಮ ದರ್ಜೆ ಹಾಗೂ ಆಫೀಸ್ ಪ್ರಾಕ್ಟೀಸ್ ಅಂಡ್ ಪ್ರೋಸಿಜರ್, ಪ್ರಥಮ, ಪ್ರೌಢ ದರ್ಜೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರುವವರು ಸರ್ಕಾರಿ ಕಚೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ನೌಕರರು ಹಾಗೂ ಅಧಿಕೃತ ವಾಣಿಜ್ಯ ವಿದ್ಯಾ ಸಂಸ್ಥೆಗಳಲ್ಲಿ ಸಹ ನಿರ್ದೇಶಕರಿಂದ ಅನುಮೋದನೆ ಪಡೆದು ಕರ್ತವ್ಯ ನಿರ್ವಹಿಸುತ್ತಿರುವ ಬೋಧಕರು ನಿಗಧಿತ ಶುಲ್ಕ ರೂ. 200.00 ಗಳನ್ನು ನಿರ್ದೇಶಕರು (ಇತರೆ ಪರೀಕ್ಷೆಗಳು) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು - 560 003 ಇವರ ಹೆಸರಿಗೆ ಸಂದಾಯವಾಗುವಂತೆ ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ನೆಫ್ಟ್ ಚಲನ್ (NEFT Challan) ಅಥವಾ ಡಿ.ಡಿ. ಮೂಲಕ ಪಡೆದು ದಿನಾಂಕ:14-01-2016 ರೊಳಗೆ ಸಲ್ಲಿಸಿ ನೋಂದಣಿ ಮಾಡಿಸಿಕೊಳ್ಳಲು ತಿಳಿಸಿದೆ.

ಕವನ:ಜಿಪಿಆರ್

# ಹೊಸ ವರ್ಷದ ಶುಭಾಶಯ

ಬೆಂಗಳೂರು, ಡಿಸೆಂಬರ್ 31(ಕರ್ನಾಟಕ ವಾರ್ತೆ)

ಕರ್ನಾಟಕ ವಿಧಾನ ಪರಿಷತ್‌ನ ಉಪಸಭಾಪತಿ ಶ್ರೀ ಮರಿತಿಪ್ಪೇಗೌಡ ಅವರು ನಾಡಿನ ಜನತೆಗೆ ಹೊಸ ವರ್ಷದ ಶುಭಾಶಯವನ್ನು ತಿಳಿಸಿದ್ದಾರೆ. 2016 ನೇ ಸಾಲಿನ ಹೊಸ ವರ್ಷವು ನಾಡಿನ ಸಮಸ್ತ ಜನತೆಗೆ ಸುಖ ಶಾಂತಿ ನೆಮ್ಮದಿಗಳ ಸಮ್ಮಿಲನದಿಂದ ಸದಾ ಹರ್ಷೋಲ್ಲಾಸಗಳನ್ನು ತರಲೆಂದು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

ಕವನ:ಜಿಪಿಆರ್